**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಅಫಜಲಪೂರ.**

**ಸಿಸಿ ನಂ.251/2020**

**ಫಿರ್ಯಾದಿಃ** ಸರಕಾರದ ಪರವಾಗಿಃ ಅಫಜಲಪೂರ ಪೊಲೀಸ ಠಾಣೆ.

**-ಃಃ ವಿರುದ್ದ ಃಃ-**

**ಆರೋಪಿ/ತರುಃ** ಸಿದ್ದನಗೌಡ ತಂದೆ ಬಸನಗೌಡ ಬಿರಾದಾರ,
ವಃ 40 ವರ್ಷ, ಉಃ ಲಾರಿ ಚಾಲಕ ಮತ್ತು ಮಾಲೀಕ,
ಸಾಃ ಐನಾಪುರ ಗ್ರಾಮ, ತಾಃ ಜಿಃ ವಿಜಯಪೂರ.

**ದೋಷಾರೋಪಣೆ**

ನಾನು ಶ್ರೀ ಅನಿಲ ಅಮಾತೆ., ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಅಫಜಲಪೂರ, ಈ ಮೂಲಕ ಕೆಳಕಂಡಂತೆ ನಿಮ್ಮನ್ನು ಆರೋಪಕ್ಕೆ ಗುರಿಪಡಿಸುತ್ತೇನೆ.

ದಿನಾಂಕ 05.10.2019 ರಂದು ಬೆಳಗಿನ ಜಾವ 04-40 ಗಂಟೆ ಸುಮಾರಿಗೆ ಅಫಜಲಪೂರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ಹವಳಗಾ ಗ್ರಾಮದ ರೇವಣಸಿದ್ದೇಶ್ವರ ಗುಡಿಯ ಹತ್ತಿರ ಆರೋಪಿತನಾದ ನೀವು ನಿನ್ನ ಬಾಬ್ತು ಕೆಎ-28-ಸಿ-1190 ನೇದ್ದರ ಲಾರಿಯಲ್ಲಿ ಕಳ್ಳತನದಿಂದ ಯಾವುದೇ ಪರವಾನಿಗೆ ಇಲ್ಲದೆ ಹಾಗೂ ರಾಜ್ಯ ಸರಕಾರಕ್ಕೆ ರಾಜ್ಯ ಧನ ಕಟ್ಟದೆ ಅಕ್ರಮವಾಗಿ ಲಾರಿಯಲ್ಲಿ ಮರಳು ತುಂಬುತ್ತಿದ್ದ ಕಾರಣ, ಆ ಮೂಲಕ ಆರೋಪಿತನಾದ ನೀವು ಭಾ.ದಂ.ಸಂ.ಕಲಂ. 379 ರ ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುತ್ತೀಯಾ.

ಕಾರಣ ಮೇಲೆ ಹೇಳಿದ ಅಪರಾಧಕ್ಕಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಪ್ರಃ-1) ಮೇಲ್ಕಾಣಿಸಿದ ದೋಷಾರೋಪಣೆಯನ್ನು ಓದಿ ಹೇಳಿ ತಿಳಿಸಿದ್ದನ್ನು ಅರ್ಥಮಾಡಿಕೊಂಡಿದ್ದೀರಾ?

ಉಃ

ಪ್ರಃ-2) ನಿಮ್ಮ ತಪ್ಪನ್ನು ಒಪ್ಪಿಕೊಳ್ಳುತ್ತೀಯೋ ಅಥವಾ ವಿಚಾರಣೆ ನಡೆಯಬೇಕಾ?

ಉಃ

(ದೋಷಾರೋಪಣೆಯನ್ನು ಆರೋಪಿತನಿಗೆ ಓದಿ ಹೇಳಿದ್ದು, ಆತನು ನೀಡಿದ ಹೇಳಿಕೆಯನ್ನು ಯಥಾವತ್ತಾಗಿ ದಾಖಲಿಸಿದ್ದು, ಅದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣೀಕರಿಸುತ್ತೇನೆ)

ದಿನಾಂಕಃ 05-04-2025 ಪ್ರ.ದ.ನ್ಯಾ.ದಂ. ಅಫಜಲಪೂರ